ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ಅವೈಜ್ಞಾನಿಕವಾಗಿ ರಸ್ತೆಗಳಲ್ಲಿ ಉಬ್ಬುಗಳನ್ನು ನಿರ್ಮಿಸಿರುವ ಕುರಿತು

ಶ್ರೀಹೆಚ್.ಎಂ.ರಮೇಶ್‌ಗೌಡ(ವಿಧಾನಸಭೆಯಿಂದಚುನಾಯಿತರಾದವರು) :-

635 (818) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಹೆದ್ದಾರಿಗಳಲ್ಲಿ ಅವೈಜ್ಞಾನಿಕವಾಗಿ ರಸ್ತೆಗಳಲ್ಲಿ ಉಬ್ಬುಗಳನ್ನು ನಿರ್ಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ರೀತಿ ಅವೈಜ್ಞಾನಿಕವಾಗಿ ಉಬ್ಬುಗಳನ್ನು ನಿರ್ಮಿಸಲು ಕಾರಣಗಳೇನು ;

(ಇ) ನ್ಯಾಯಾಲಯದ ಆದೇಶವಿದ್ದರೂ ಸಹ ಈ ರೀತಿ ರಸ್ತೆ ಉಬ್ಬುಗಳನ್ನು ನಿರ್ಮಿಸುವ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಅವೈಜ್ಞಾನಿಕವಾಗಿ ರಸ್ತೆ ಉಬ್ಬುಗಳನ್ನು ತೆರವುಗೊಳಿಸಲು ಸರ್ಕಾರದಿಂದ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ?